ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 223 ಜಿಪಸ 2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 28.05.2019

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿ ಸ್ವಂತ ಅನುದಾನದಲ್ಲಿ ವಿಕಲಚೇತನರ ಕಲ್ಯಾಣಕ್ಕಾಗಿ ಅನುದಾನ ವಿನಿಯೋಗಿಸುವ ಬಗ್ಗೆ.

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 440 ಗ್ರಾಪಂಅ 2015, ದಿನಾಂಕ 03.09.2015
2) ಮಾನ್ಯ ಮುಖ್ಯಮಂತ್ರಿಯವರ 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 157
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಅ.ಸ.ಪತ್ರ ಸಂಖ್ಯೆ: ಮಮಿ 188 ಪಿಹೆಚ್ಇ 2018(ಭಾಗ-4), ದಿನಾಂಕ 07.01.2019

***

ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಸಂಪೂರ್ಣ ಭಾಗವಹಿಸುವಿಕೆ) ಅಧಿನಿಯಮ, 1995ರ ಕಲಂ 46ರ ಪ್ರಕಾರ ಗ್ರಾಮ ಪಂಚಾಯತಿಗಳು ವಿಕಲಚೇತನರ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ, ವೈದ್ಯಕೀಯ ಹಾಗೂ ಪುನರ್ವಸತಿ ಕಾರ್ಯಕ್ರಮಗಳಿಗೆ ತಮ್ಮ ಸ್ವಂತ ಅನುದಾನದಲ್ಲಿ ಶೇ.3ರಷ್ಟು ಅನುದಾನವನ್ನು ಕಡ್ಡಾಯವಾಗಿ ಮೀಸಲಿರಿಸಿ, ವಿನಿಯೋಗಿಸಲು ಉಲ್ಲೇಖ (1)ರಲ್ಲಿ ಮಾರ್ಗಸೂಚಿಗಳನ್ನು ನೀಡಲಾಗಿದೆ.

ಮಾನ್ಯ ಮುಖ್ಯಮಂತ್ರಿಯವರ 2018-19ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:157ರಲ್ಲಿ ವಿಕಲಚೇತನರಿಗೆ ಅಂಗವಿಕಲತೆಯ ಪ್ರಮಾಣಕ್ಕನುಗುಣವಾಗಿ ಮಹಿಳೆಯರಿಗೆ ಸೂಕ್ತ ಆದ್ಯತೆ ನೀಡುವುದರೊಂದಿಗೆ ಬಡತನ ನಿರ್ಮೂಲನೆ ಮತ್ತು ವಿವಿಧ ಅಭಿವೃದ್ಧಿ ಯೋಜನೆಗಳಲ್ಲಿ ಶೇ.5 ರಷ್ಟು ಮೀಸಲಾತಿ ಒದಗಿಸಲು ಘೋಷಿಸಲಾಗಿದೆ. ಅದರಂತೆ ಸೂಕ್ತ ಕ್ರಮ ಕೈಗೊಳ್ಳಲು ಉಲ್ಲೇಖ (3)ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು ಕೋರಿರುತ್ತಾರೆ.

ಮಾನ್ಯ ಮುಖ್ಯಮಂತ್ರಿಯವರ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಗ್ರಾಮ ಪಂಚಾಯತಿಗಳು ವಿಕಲಚೇತನರ ಕಲ್ಯಾಣ ಕಾರ್ಯಕ್ರಮಗಳಿಗೆ ಶೇ.3 ರ ಬದಲಾಗಿ ಶೇ.5ರಷ್ಟು ಅನುದಾನವನ್ನು ಗ್ರಾಮ ಪಂಚಾಯತಿ ಸ್ವಂತ ಅನುದಾನದಲ್ಲಿ ಮೀಸಲಿರಿಸಿ, ಉಲ್ಲೇಖ (1)ರಲ್ಲಿ ನೀಡಲಾದ ಮಾರ್ಗಸೂಚಿಗಳನ್ವಯ ವಿನಿಯೋಗಿಸಲು ಅಗತ್ಯ ಕ್ರಮವಹಿಸಲು ತಿಳಿಸಿದೆ.

20/5/19

(ಕೆ.ಯಾಲಕ್ಕಿಗೌಡ)
ನಿರ್ದೇಶಕರು(ಪಂ.ರಾಜ್-1) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:
1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
4) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5) ಕರ್ನಾಟಕ ವಿಕಾಸ – ಪ್ರಕಟಣೆಗಾಗಿ.

ಪ್ರತಿಯನ್ನು ಮಾಹಿತಿಗಾಗಿ:
1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. &ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.